# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 705 |
| ಮಾನ್ಯ ಸದಸ್ಯರ ಹೆಸರು | ಶ್ರೀ ಎಂ .ನಾಗರಾಜು, (ವಿಧಾನಸಭಾ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 23.12.2022 |
| ಉತ್ತರಿಸುವ ಸಚಿವರು | ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರ್ನಾಟಕ ರಾಜ್ಯದಲ್ಲಿ ಪ್ರವರ್ಗ-1 ರಡಿಯಲ್ಲಿ ಸುಮಾರು 95 ಜಾತಿ ಮತ್ತು ಉಪಜಾತಿಗಳನ್ನು ಒಳಗೊಂಡಂತೆ ಆರ್ಥಿಕವಾಗಿ, ಶೈಕ್ಷಣಿಕವಾಗಿ ಮತ್ತು ಸಾಮಾಜಿಕವಾಗಿ ಹಿಂದುಳಿದಿರುವ ಅಂದಾಜು ಒಂದು ಕೋಟಿ ಜನ ಸಂಖ್ಯೆ ವಾಸಿಸುತ್ತಿದ್ದು, ಪ್ರವರ್ಗ-1ರಲ್ಲಿ ಕೇವಲ ಶೇಕಡಾ 4ರಷ್ಟು ಮೀಸಲಾತಿಯನ್ನು ನೀಡಲಾಗಿದ್ದು, ಇದರಡಿಯಲ್ಲಿ ಬರುವ ಸಮುದಾಯಗಳಿಗೆ ಆಯಾ ಸಮುದಾಯಗಳ ಜನ ಸಂಖ್ಯೆಗನುಗುಣವಾಗಿ ಮೀಸಲಾತಿ ಲಭ್ಯವಾಗುತ್ತಿಲ್ಲ ಮತ್ತು ಇದರ ಉದ್ದೇಶವು ಈಡೇರುತ್ತಿಲ್ಲ. ಆದ್ದರಿಂದ, ಪ್ರಸ್ತುತ ಪ್ರವರ್ಗ-1ರಡಿಯಲ್ಲಿ ನೀಡಲಾಗುತ್ತಿರುವ ಮೀಸಲಾತಿಯನ್ನು ಶೇಕಡಾ 10ಕ್ಕೆ ಹೆಚ್ಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ವಿವರವನ್ನು ನೀಡುವುದು) | ಹಿಂದುಳಿದ ವರ್ಗಗಳ ಸಮುದಾಯಗಳಿಗೆ ಹಾಲಿ ಇರುವ ಮೀಸಲಾತಿಯನ್ನು ಹೆಚ್ಚಿಸುವ ಯಾವುದೇ ಪ್ರಸ್ತಾವನೆಯು ಸರ್ಕಾರದಲ್ಲಿ ಇರುವುದಿಲ್ಲ. |
| ಆ) | ಗೂರ್ಖಾ ಸಮುದಾಯವು ಶೈಕ್ಷಣಿಕವಾಗಿ, ಆರ್ಥಿಕವಾಗಿ ಮತ್ತು ರಾಜಕೀಯವಾಗಿ ಅತ್ಯಂತ ಹಿಂದುಳಿದ ವರ್ಗವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದಲ್ಲಿ, ಸರ್ಕಾರವು ಈ ಸಮುದಾಯಕ್ಕೆ ಮೂಲಭೂತ ಸೌಲಭ್ಯಗಳನ್ನು ನೀಡಿದೆಯೇ ಮತ್ತು ಮಕ್ಕಳಿಗೆ ಶಿಕ್ಷಣದಲ್ಲಿ ಯಾವ ಯಾವ ಸೌಲಭ್ಯಗಳನ್ನು ನೀಡಲಾಗಿದೆ ಮತ್ತು ಗೂರ್ಖಾ ಸಮುದಾಯಕ್ಕೆ ಪ್ರವರ್ಗ-1 ರಡಿಯಲ್ಲಿ ಜಾತಿ ಪ್ರಮಾಣ ಪತ್ರ ನೀಡಲಾಗುತ್ತಿದೆಯೇ; | ಸರ್ಕಾರದ ಆದೇಶ ಸಂಖ್ಯೆ:ಸಕಇ 225 ಬಿಸಿಎ 2000 ದಿನಾಂಕ:30.03.2002ರ ಹಿಂದುಳಿದ ವರ್ಗಗಳ ಮೀಸಲಾತಿ ಪಟ್ಟಿಯಲ್ಲಿ ಪ್ರವರ್ಗ-1ರಡಿ ಗೂರ್ಖಾ ಸಮುದಾಯವನ್ನು ಸೇರ್ಪಡೆ ಮಾಡಿ ಭಾರತ ಸಂವಿಧಾನದ ಅನುಚ್ಛೇದ 15(4) ಹಾಗೂ 16 (4)ರನ್ವಯ ಕ್ರಮವಾಗಿ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಹಾಗೂ ಸಾರ್ವಜನಿಕ ಸೇವೆಗಳಲ್ಲಿ ಮೀಸಲಾತಿಯನ್ನು ಕಲ್ಪಿಸಲಾಗಿದೆ.<br><br>ಗೂರ್ಖಾ ಸಮುದಾಯವು ಈ ಕೆಳಕಂಡ ಶೈಕ್ಷಣಿಕ ಸೌಲಭ್ಯಗಳನ್ನು ಪಡೆಯಲು ಅರ್ಹವಿರುತ್ತದೆ.<br>1. ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನ<br>2. ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ<br>3. ಶುಲ್ಕ ಮರುಪಾವತಿ<br>4. ವಿದ್ಯಾಸಿರಿ ಊಟ ಮತ್ತು ವಸತಿ ಸೌಲಭ್ಯ<br>5. ಪೂರ್ಣಾವಧಿ ಪಿ.ಹೆಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಮಾಸಿಕ ವ್ಯಾಸಂಗ ವೇತನ/ಫೆಲೋಶಿಪ್. |

| | | |
|---|---|---|
| | | 6. IIM, IIT,IISc ಮುಂತಾದ ಪ್ರತಿಷ್ಠಿತ ರಾಷ್ಟ್ರೀಯ ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಪ್ರವೇಶ ಪಡೆಯುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನ.<br>7. ಡಿ. ದೇವರಾಜ ಅರಸು ಪ್ರತಿಭಾ ಪುರಸ್ಕಾರ. |
| ಇ) | ರಾಜ್ಯದಲ್ಲಿ ವಾಸಿಸುತ್ತಿರುವ ಗೂರ್ಖಾ ಸಮುದಾಯದ ಒಟ್ಟು ಜನ ಸಂಖ್ಯೆಯೆಷ್ಟು; ಗೂರ್ಖಾ ಸಮುದಾಯಕ್ಕೆ ಸರ್ಕಾರದಿಂದ ಗೂರ್ಖಾ ಸಮುದಾಯದ ಭವನವನ್ನು ನಿರ್ಮಿಸಲು ಅನುದಾನದೊಂದಿಗೆ ಬೆಂಗಳೂರಿನಲ್ಲಿ ನಿವೇಶನವನ್ನು ನೀಡುವ ಯೋಜನೆಯಿದೆಯೇ? (ವಿವರವನ್ನು ನೀಡುವುದು) | ರಾಜ್ಯದಲ್ಲಿ ವಾಸಿಸುತ್ತಿರುವ ಗೂರ್ಖಾ ಸಮುದಾಯದ ಒಟ್ಟು ಜನ ಸಂಖ್ಯೆಯ ಸ್ಪಷ್ಟ ಮಾಹಿತಿ ಇರುವುದಿಲ್ಲ.<br><br>ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿ ವಿವಿಧ ಸಮುದಾಯಗಳ ಅಭಿವೃದ್ಧಿ ಕಾರ್ಯಕ್ರಮದಡಿ ಹಿಂದುಳಿದ ವರ್ಗಗಳಿಗೆ ಸೇರಿದ ವಿವಿಧ ಸಂಘ-ಸಂಸ್ಥೆಗಳಿಗೆ/ಟ್ರಸ್ಟ್‌ಗಳಿಗೆ ಸಮುದಾಯ ಭವನ/ ವಿದ್ಯಾರ್ಥಿ ನಿಲಯಗಳ ಕಟ್ಟಡ ನಿರ್ಮಾಣಕ್ಕೆ ಮಾತ್ರ ಸಹಾಯಧನ ಮಂಜೂರು ಮಾಡಲು ಅವಕಾಶ ಕಲ್ಪಿಸಲಾಗಿದೆ.<br><br>ಮುಂದುವರೆದು, ಸದರಿ ಯೋಜನೆಯಡಿ ಸಂಬಂಧಪಟ್ಟ ಸಂಘ-ಸಂಸ್ಥೆಯವರು ನಿವೇಶನ ಹೊಂದಿದ್ದಲ್ಲಿ ಸರ್ಕಾರದ ಮಾರ್ಗ ಸೂಚಿಗಳನ್ವಯ ಅಗತ್ಯ ದಾಖಲಾತಿಗಳೊಂದಿಗೆ ಪ್ರಸ್ತಾವನೆ ಸಲ್ಲಿಸಿದಲ್ಲಿ ಲಭ್ಯವಿರುವ ಅನುದಾನದಡಿ ರಾಜ್ಯದ ಒಟ್ಟಾರೆ ಬೇಡಿಕೆಯನ್ನಾಧರಿಸಿ ಸಹಾಯಧನ ಮಂಜೂರು ಮಾಡುವ ಬಗ್ಗೆ ಪರಿಶೀಲಿಸಲಾಗುವುದು. |

**ಸಂಖ್ಯೆ: ಹಿಂವಕ 260 ಬಿಸಿಎ 2022**

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು